ಕರ್ನಾಟಕ ಸರ್ಕಾರ

ಸಂಖ್ಯೆ:ಕಾಶಿಇ/263/ಅಂವಿಮಪೋಭ/ಸೇವಿ-1/2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:20.03.2017.

## ಸುತ್ತೋಲೆ

**ವಿಷಯ:** ಮನೋವೈಕಲ್ಯತೆಯಿಂದ ಬಳಲುತ್ತಿದ್ದು (Autism, Cerebral Palsy or Mental Retardation) ವಿಶೇಷ/ಸಾಮಾನ್ಯ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಮಕ್ಕಳಿರುವ ರಾಜ್ಯ ಸರ್ಕಾರಿ ನೌಕರರಿಗೆ ಶಿಕ್ಷಣ ಭತ್ಯೆಯ ಸೌಲಭ್ಯವನ್ನು ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ:** 1.ಸರ್ಕಾರಿ ಆದೇಶ ಸಂಖ್ಯೆ:ಎಫ್.ಡಿ 12 ಎಸ್.ಆರ್.ಪಿ 2012(XIII), ಬೆಂಗಳೂರು, ದಿನಾಂಕ:10.06.2013
2.ಸರ್ಕಾರಿ ಆದೇಶ ಸಂಖ್ಯೆ:ಎಫ್.ಡಿ 1 ಎಸ್.ಆರ್.ಪಿ 2016, ಬೆಂಗಳೂರು, ದಿನಾಂಕ:19.01.2016
3.ಸರ್ಕಾರಿ ಆದೇಶ ಸಂಖ್ಯೆ:ಎಫ್.ಡಿ 35 ಎಸ್.ಆರ್.ಪಿ 2016, ಬೆಂಗಳೂರು, ದಿನಾಂಕ:20.10.2016

*****

ಸೂಚಿತ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಚಲನ/ಮನೋವೈಕಲ್ಯತೆಯಿಂದ ಬಳಲುತ್ತಿದ್ದು (Autism, Cerebral Palsy or Mental Retardation) ವಿಶೇಷ/ಸಾಮಾನ್ಯ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಮಕ್ಕಳಿರುವ ರಾಜ್ಯ ಸರ್ಕಾರಿ ನೌಕರರಿಗೆ ಶಿಕ್ಷಣ ಭತ್ಯೆಯ ಸೌಲಭ್ಯವನ್ನು ಮಂಜೂರಾತಿ ಸಂಬಂಧ ಗ್ರೂಪ್-ಸಿ ಮತ್ತು ಗ್ರೂಪ್-ಡಿ ನೌಕರರಿಗೆ ಹಾಗೂ ಸಹಾಯಕ ಪ್ರಾಧ್ಯಾಪಕರುಗಳಿಗೆ ಸದರಿ ಸೌಲಭ್ಯವನ್ನು ಪ್ರಾಂಶುಪಾಲರ ಹಂತದಲ್ಲಿಯೇ ಪರಿಶೀಲಿಸಿ ಈ ಕೆಳಕಂಡ ಷರತ್ತುಗಳು ಪೂರೈಸಿರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದು ನೌಕರನು ಅರ್ಹರಿದ್ದಲ್ಲಿ ಸದರಿ ಭತ್ಯೆಯನ್ನು ಷರತ್ತುಗಳು ಪೂರೈಸಿರುವ ಕುರಿತು ಎಲ್ಲಾ ಪ್ರಮಾಣ ಪತ್ರಗಳನ್ನು ಹಾಜರು ಪಡಿಸಿದ ದಿನಾಂಕದಿಂದ ಮಂಜೂರು ಮಾಡುವುದು.

1. ಸರ್ಕಾರಿ ನೌಕರನ ಮಕ್ಕಳು ಮನೋವೈಕಲ್ಯತೆಯಿಂದಾಗಿ ಬಳಲುತ್ತಿರಬೇಕು. (ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ)
2. ಮನೋವೈಕಲ್ಯತೆಯಿಂದ ಬಳಲುತ್ತಿರುವ ಮಕ್ಕಳು ವಿಶೇಷ ಸಂಯೋಜಿತ (Intergrated) ಅಥವಾ ಸಾಮಾನ್ಯ ಶಾಲೆಗಳಲ್ಲಿ 01 ರಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರಬೇಕು. (ಶಾಲೆಯ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ)
3. ಸರ್ಕಾರಿ ನೌಕರನ ಮನೋವೈಕಲ್ಯತೆಯಿಂದ ಬಳಲುತ್ತಿರುವ ಮಕ್ಕಳು ಗರಿಷ್ಠ 18 ವರ್ಷಗಳ ವಯೋಮಿತಿಯೊಳಗೆ ಇರಬೇಕು (ಜನನ ಪ್ರಮಾಣ ಪತ್ರ).
4. ಸರ್ಕಾರಿ ನೌಕರನ ಮನೋವೈಕಲ್ಯತೆಯಿಂದ ಬಳಲುತ್ತಿರುವ ಮಕ್ಕಳು ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಯಾವುದೇ ಪೋಷಣಾ ಭತ್ಯೆ / ಇತರೆ ಸೌಲಭ್ಯವನ್ನು ಪಡೆಯುತ್ತಿರಬಾರದು. (ನೋಟರಿಯವರಿಂದ ಅಫಿಡವಿಟ್ ಸಲ್ಲಿಸುವುದು)
5. ಮನೋವೈಕಲ್ಯತೆಯಿಂದ ಬಳಲುತ್ತಿರುವ ಮಕ್ಕಳ ತಂದೆ/ತಾಯಿ ಇಬ್ಬರು ಸರ್ಕಾರಿ ನೌಕರಿಯಲ್ಲಿದ್ದರೆ, ಒಬ್ಬರಿಗೆ ಮಾತ್ರ ಈ ಸೌಲಭ್ಯವನ್ನು ಮಂಜೂರು ಮಾಡುವುದು. (ತಂದೆ/ತಾಯಿ ಈ ಸೌಲಭ್ಯವನ್ನು ಪಡೆಯದೇ ಇರುವ ಬಗ್ಗೆ ನೇಮಕಾತಿ ಪ್ರಾಧಿಕಾರದಿಂದ ದೃಢೀಕರಣ ಪತ್ರ ಸಲ್ಲಿಸುವುದು)

ಸಹ ಪ್ರಾಧ್ಯಾಪಕರುಗಳಿಗೆ ಸದರಿ ಸೌಲಭ್ಯ ಮಂಜೂರು ಮಾಡಲು ಪ್ರಸ್ತಾವನೆಯನ್ನು ಈ ಕಛೇರಿಗೆ ಸಲ್ಲಿಸುವಾಗ ಮೇಲ್ಕಂಡ ಎಲ್ಲಾ ಷರತ್ತುಗಳನ್ನು ಪೂರೈಸಿರುವ ಕುರಿತು ಮೂಲ ದಾಖಲೆಗಳೊಂದಿಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ.

(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

Shilpa

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ,

1. ಕಾಲೇಜು ಶಿಕ್ಷಣ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಸೂಕ್ತ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಕಛೇರಿ ಪ್ರತಿ.

263-N.B.Shyamala SFN